ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2019–20 ದಿನಾಂಕ: 15–02–2020

# ಪತ್ರಿಕಾ ಆಮಂತ್ರಣ

1. **ಕನಾಟಕ ಜಾನಪದ ಪರಿಷತ್ತು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ – ಜಾನಪದ ಲೋಕ ಬೆಳ್ಳಿಹಬ್ಬ:**

**ದಿವ್ಯ ಸಾನಿಧ್ಯ:**

**ಶ್ರೀ ಶ್ರೀ ಡಾ ನಿರ್ಮಲಾನಂದನಾಥ ಮಹಾಸ್ವಾಮಿಗಳು**
**ಪೀಠಾಧ್ಯಕ್ಷರು, ಶ್ರೀ ಆದಿಚುಂಚನಗಿರಿ ಮಠ ಹಾಗೂ ಪ್ರಧಾನ ಪೋಷಕರು, ಕರ್ನಾಟಕ ಜಾನಪದ ಪರಿಷತ್ತು.**

**ಉದ್ಘಾಟನೆ ಹಾಗೂ ಗಣ್ಯರಿಗೆ ಸನ್ಮಾನ:**

**ಬಿ.ಎಸ್. ಯಡಿಯೂರಪ್ಪ**
**ಸನ್ಮಾನ್ಯ ಮುಖ್ಯಮಂತ್ರಿಗಳು,**
**ಕರ್ನಾಟಕ ಸರ್ಕಾರ**

**ಬೆಳಿಹಬ್ಬ ಸಂಚಿಕೆ ಬಿಡುಗಡೆ ಮತ್ತು ಕೃತಿಗಳ ಬಿಡುಗಡೆ**

**ಸಿ.. ಟಿ. ರವಿ,**
**ಕನ್ನಡ ಮತ್ತು ಸಂಸ್ಕೃತಿ ಹಾಗು ಪ್ರವಾಸೋದ್ಯಮ ಸಚಿವರು**

**ಜಾನಪದ ಮೆರವಣಿಗೆ ಉದ್ಘಾಟನೆ:**

**ಗೌತಮ್ ಕುಮಾರ್,**
**ಮಹಾಪೌರರು,**
**ಬೃಹತ್ ಬೆಂಗಳೂರು ಮಹಾನಗರಪಾಲಿಕೆ.**

**<u>ಅಧ್ಯಕ್ಷತೆ:</u>**
**ಉದಯ್ ಬಿ. ಗರುಡಾಚಾರ್, ಶಾಸಕರು,**
**ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ.**

**ದಿನಾಂಕ: 16–02–2020, ಭಾನುವಾರ, ಸಮಯ: ಸಂಜೆ 5–00 ಗಂಟೆಗೆ**
**ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ. ಸಿ. ರಸ್ತೆ, ಬೆಂಗಳೂರು**
**(ಜಾನಪದ ಲೋಕ ಬೆಳ್ಳಿಹಬ್ಬ ಬೆಳಿಗ್ಗೆ 9–00 ರಿಂದ ರಾತ್ರಿ 9–00 ಗಂಟೆವರೆಗೆ)**

2. **ಜಂಟಿ ಅಧಿವೇಶನದಲ್ಲಿ ಉಭಯ ಸದನಗಳನ್ನು ಉದ್ದೇಶಿಸಿ ಮಾನ್ಯ ರಾಜ್ಯಪಾಲರ ಭಾಷಣ**

**ದಿನಾಂಕ: 17–02–2020, ಸೋಮವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ**
**ಸ್ಥಳ: ವಿಧಾನಸಭೆಯ ಸಭಾಂಗಣ, ವಿಧಾನಸೌಧ, ಬೆಂಗಳೂರು**

ಪತ್ರಿಕಾ ಪ್ರಕಟಣೆ

## ಶಾಲಾ ಆವರಣದಲ್ಲಿ ಕನ್ನಡ ಮಾತನಾಡುವ ಮಕ್ಕಳಿಗೆ ದಂಡ ವಸೂಲಿ ವಿರುದ್ಧ ಕಠಿಣ ಕ್ರಮ ಜರುಗಿಸಲು ಮನವಿ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದಿಂದ ಮಾನ್ಯತೆಯನು ಪಡೆದು ನಡೆಸುತ್ತಿರುವ ಎಸ್.ಎಲ್.ಎಸ್ ಅಂತರಾಷ್ಟ್ರೀಯ ಗುರುಕುಲ ಶಾಲೆ, ಚೆನ್ನಸಂದ್ರ, ಬೆಂಗಳೂರು ಇವರು ಒಂದು ಲಿಖಿತ ಸೂಚನೆಯ ಮೂಲಕ ತನ್ನ ಶಾಲೆಯಲ್ಲಿ ಕಲಿಯುತ್ತಿರುವ ಮಕ್ಕಳು ಶಾಲಾ ಆವರಣದಲ್ಲಿ ಕನ್ನಡದಲ್ಲಿ ಮಾತನಾಢಿದರೆ ಅದನ್ನು ಅಪರಾಧವೆಂದು ಪರಿಗಣಿಸಿ, ಮೊದಲ ಬಾರಿ ರೂ 50/– ಹಾಗೂ ಪುನರಾವರ್ತನೆಯ ಪ್ರಕರಣಕ್ಕೆ ರೂ 100/– ರಂತೆ ದಂಡ ವಿಧಿಸುವುದಾಗಿ ಮಕ್ಕಳ ಪೋಷಕರಿಗೆ ಸೂಚನೆ ಪತ್ರವನ್ನು ಕಳುಹಿಸಿರುತ್ತಾರೆ.

ಈ ಪ್ರಕರಣವು ಶಿಕ್ಷಣ ಹಕ್ಕು ಕಾಯಿದೆ 2019, ಶಿಕ್ಷಣ ಹಕ್ಕು ನಿಯಮಗಳು 2012, ಕನ್ನಡ ಕಲಿಕಾ ಅಧಿನಿಯಮ 2015 ಮತ್ತು ಕನ್ನಡ ಕಲಿಕಾ ನಿಯಮಗಳು 2017 ಗಳನ್ನು ಪೂರ್ಣವಾಗಿ ಉಲಂಘಿಸಲಾಗಿರುವುದರಿಂದ ಸದರಿ ಶಾಲೆಯ ಮಾನ್ಯತೆಯನ್ನು ನಿಯಮಾನುಸಾರ ರದ್ದುಗೊಳಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಕೋರಿರುತ್ತಾರೆ. ಈ ನಿಟ್ಟಿನಲ್ಲಿ ಪ್ರಕರಣವನ್ನು ಕೂಲಂಕುಷವಾಗಿ ಪರಿಶೀಲಿಸಿ ವರದಿ ನೀಡುವಂತೆ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ ಕಾರ್ಯದರ್ಶಿಗಳಿಗೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಸೂಚಿಸಿರುತ್ತಾರೆ ಎಂದು ಪ್ರಕಟಣೆ ತಿಳಿಸಿದೆ.

## ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯ ಅವಧಿಯಲ್ಲಿ ಬಸ್‌ಗಳಲ್ಲಿ ಉಚಿತವಾಗಿ ಸಂಚರಿಸಲು ಆದೇಶ ಹೊರಡಿಸುವಂತೆ ಸಚಿವರ ಮನವಿ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

**ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಗಳು ಮಾರ್ಚ್ ತಿಂಗಳಿನಿಂದ ಆರಂಭಗೊಳ್ಳುತ್ತಿದ್ದು, ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರಗಳಿಗೆ ತೆರಳಬೇಕಾಗಿರುತ್ತದೆ. ಪ್ರತಿದಿನ ತಮ್ಮ ಶಾಲಾ ಕಾಲೇಜುಗಳಿಗೆ ತೆರಳಲು ವಿದ್ಯಾರ್ಥಿಗಳು ಪಡೆದುಕೊಂಡಿರುವ ಬಸ್‌ಪಾಸ್‌ಗಳಲ್ಲಿ ನಿಗದಿತ ಮಾರ್ಗದಲ್ಲಿ ಮಾತ್ರವೇ ಸಂಚರಿಸಲು ಅವಕಾಶವಿರುತ್ತದೆ.**

**ಆದರೆ ಪರೀಕ್ಷಾ ಕೇಂದ್ರಗಳು ವಿದ್ಯಾರ್ಥಿಗಳು ಪಾಸ್‌ಗಳ ನಮೂದಿತವಾದ ಮಾರ್ಗಗಳ ಹೊರತಾದ ಸ್ಥಳಗಳಲ್ಲಿ ಸಹ ಇರುತ್ತದೆ. ಪರೀಕ್ಷಾ ಅವಧಿಯಲ್ಲಿ ಇತರ ಮಾರ್ಗಗಳಲ್ಲಿಯೂ ವಿದ್ಯಾರ್ಥಿಗಳು ಸಂಚರಿಸಬೇಕಾಗಿರುತ್ತದೆ. ಪರೀಕ್ಷಾ ಕೇಂದ್ರಗಳಿಗೆ ತೆರಳಲು ತಮ್ಮ ಶಾಲಾ ಕಾಲೇಜುಗಳ ಗುರುತಿನ ಚೀಟಿಯನ್ನು ತೋರಿಸಿದರೆ ಉಚಿತವಾಗಿ ಪ್ರಯಾಣ ಮಾಡಲು ಅನುವಾಗುವಂತೆ ವಿದ್ಯಾರ್ಥಿ ಸಮೂಹದ ಹಿತದೃಷ್ಟಿಯಿಂದ ಸೂಕ್ತ ಸುತ್ತೋಲೆ ಹೊರಡಿಸುವಂತೆ ಸಚಿವರು ಸಂಬಂಧಪಟ್ಟವರಿಗೆ ಕೋರಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.**

## ಶಾಲೆಗಳಲ್ಲಿ ಕನ್ನಡ ಬೋಧನೆ ಕುರಿತು ಉನ್ನತ ಮಟ್ಟದ ಸಮಿತಿ ರಚನೆ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

ಕನ್ನಡವನ್ನು ಪ್ರಥಮ ಅಥವಾ ದ್ವಿತೀಯ ಭಾಷೆಯನ್ನಾಗಿ ಬೋಧನೆ ಮಾಡದ ಶಾಲೆಗಳನ್ನು ಪರಿಶೀಲನೆ ನಡೆಸಲು ಮತ್ತು ಅಂತಹ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳಲು ಹಾಗೂ ಸರ್ಕಾರಿ ಶಾಲೆಗಳ ಸಬಲೀಕರಣದ ಕುರಿತಂತೆ ಕ್ರಮ ತೆಗೆದುಕೊಳ್ಳಲು ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಉನ್ನತ ಮಟ್ಟದ ಸಮಿತಿಯನ್ನು ರಚಿಸಿ ಸರ್ಕಾರ ಆದೇಶ ಹೊರಡಿಸಿದೆ.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಅಧ್ಯಕ್ಷರಾಗಿರುವ ಈ ಸಮಿತಿಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್‌ಷಣ ಅಭಿಯಾನ, ಕರ್ನಾಟಕ ಬೆಂಗಳೂರು, ಅಪರ ಆಯುಕ್ತರು, ಅಪರ ಆಯುಕ್ತಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ , ಧಾರವಾಡ. ಅಪರ ಆಯುಕ್ತರು, ಅಪರ ಆಯುಕ್ತಾಲಯ, ಸಾರ್ವಜನಿಕ ಶಿಕ್ಷಣ ಇಲಾಖೆ , ಕಲಬುರಗಿ, ನಿರ್ದೇಶಕರು, (ಪ್ರೌಢ ಶಿಕ್ಷಣ) ಆಯುಕ್ತರ ಕಚೇರಿ, ಬೆಂಗಳೂರು, ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಸಂಪರ್ಕ ಇಲಾಖೆ, ಡಾ.ವಿ.ಪಿ.ನಿರಂಜನಾರಾಧ್ಯ, ಶಿಕ್ಷಣ ತಜ್ಞರು ಇವರುಗಳು ಸಮಿತಿಯ ಸದಸ್ಯರಾಗಿರುತ್ತಾರೆ. ನಿರ್ದೇಶಕರು, (ಪ್ರಾಥಮಿಕ ಶಿಕ್ಷಣ) ಆಯುಕ್ತರ ಕಚೇರಿ, ಬೆಂಗಳೂರು, ಇವರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

## ಶಾಸ್ತ್ರೀಯ ಕನ್ನಡ ಭಾಷಾ ಅಧ್ಯಯನ ಕೇಂದ್ರದ ಸ್ಥಳ ಪರಿಶೀಲನೆ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ): ಶಾಸ್ತ್ರೀಯ ಕನ್ನಡ ಭಾಷಾ ಅಧ್ಯಯನ ಕೇಂದ್ರ ಸಮರ್ಪಕವಾಗಿ ಹಾಗೂ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗುವಂತೆ ಮೈಸೂರಿನಲ್ಲಿ (೩) ಮೂರು ಎಕರೆ ಜಾಗವನ್ನು ಸರ್ಕಾರ ಮಂಜೂರು ಮಾಡಿದ್ದು, ಈ ಸ್ಥಳವನ್ನು ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವಜನ ಸಬಲೀಕರಣ ಮತ್ತು ಕ್ರೀಡಾ ಸಚಿವರಾದ ಸಿ.ಟಿ. ರವಿಯವರು ಪರಿಶೀಲಿಸಿದರು.

ಶಾಸ್ತ್ರೀಯ ಕನ್ನಡ ಭಾಷಾ ಅಧ್ಯಯನ ಕೇಂದ್ರವು ಭಾರತೀಯ ಭಾಷಾ ಸಂಸ್ಥಾನ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತದೆ. ಶಾಸ್ತ್ರೀಯ ಕನ್ನಡ ಅತ್ಯುನ್ನತ ಕೇಂದ್ರವನ್ನು ಸ್ವಾಯತ್ತ ಸಂಸ್ಥೆಯಾಗಿ ರೂಪಿಸಬೇಕೆಂಬ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರ ಮೈಸೂರಿನಲ್ಲಿ (೩) ಮೂರು ಎಕರೆ ಜಾಗವನ್ನು ಮಂಜೂರು ಮಾಡಿದೆ. ಸದರಿ ಸ್ಥಳಕ್ಕೆ ಇಂದು ಸಚಿವರು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ, ಪ್ರಾಧಿಕಾರದ ಕಾರ್ಯದರ್ಶಿಗಳಾದ ಡಾ.ಕೆ.ಮುರಳಿಧರ, ಭಾರತೀಯ ಭಾಷಾ ಸಂಸ್ಥೆಯ ನಿರ್ದೇಶಕರು, ಮೈಸೂರು ವಿಶ್ವವಿದ್ಯಾಲಯದ ಕುಲಪತಿಗಳು, ಕುಲಸಚಿವರು ಹಾಗೂ ಅಧಿಕಾರಿಗಳ ತಂಡ ಭೇಟಿ ನೀಡಿ ಇದೇ ಸ್ಥಳದಲ್ಲಿ ತ್ವರಿತವಾಗಿ ಕೆಲಸ ಆರಂಭಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸದರಿ ಕಟ್ಟಡದ ತಾತ್ಕಲಿಕ ದುರಸ್ಥಿ ಹಾಗೂ ಇನ್ನಿತರ ಸೌಲಭ್ಯಗಳ ಅಗತ್ಯವಿದ್ದಲ್ಲಿ ಅಂದಾಜು ವೆಚ್ಚಗಳ ಪ್ರಸ್ತಾವನೆಯನ್ನು ನೀಡಿದರೆ ರಾಜ್ಯ ಸರ್ಕಾರದಿಂದ ತುರ್ತಾಗಿ ಕೆಲಸ ಆರಂಭಿಸಲು ಆರ್ಥಿಕ ನೆರವು ನೀಡುವುದಾಗಿ ತಿಳಿಸಿದ ಅವರು ರಾಜ್ಯ ಸರ್ಕಾರದ ಜಮೀನಿನ ಮಂಜೂರಾತಿ ಆದೇಶದ ಪತ್ರವನ್ನು ಭಾರತೀಯ ಭಾಷಾ ಸಂಸ್ಥೆಯ ನಿರ್ದೇಶಕರಿಗೆ ಹಸ್ತಾಂತರಿಸಿ, ಕೂಡಲೇ ಕೇಂದ್ರ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಕೇಂದ್ರ ಸರ್ಕಾರದ ಅನುಮೋದನೆಯ ನಂತರ ಸಹಕಾರ ಸಂಘ ಕಾಯ್ದೆಯ ಅಡಿಯಲ್ಲಿ ಶಾಸ್ತ್ರೀಯ ಕನ್ನಡ ಅತ್ಯುನ್ನತ ಕೇಂದ್ರವನ್ನು ಸ್ವಾಯತ್ತ ಸಂಸ್ಥೆಯಾಗಿ ನೋಂದಣಿಗೆ ಕ್ರಮ ವಹಿಸುವುದು ಹಾಗೂ ಆಡಳಿತ ಮಂಡಳಿ, ಶೈಕ್ಷಣಿಕ ಮಂಡಳಿ, ಹಣಕಾಸು ಮಂಡಳಿಯನ್ನು ನಿಯಮಾನುಸಾರ ರಚಿಸಲು ಶೀಘ್ರ ಕ್ರಮ ವಹಿಸುವಂತೆ ಭಾರತೀಯ ಭಾಷಾ ಸಂಸ್ಥೆಯ ಅಧಿಕಾರಿಗಳಿಗೆ ನಿರ್ದೇಶಿಸಿದರು.

## ಮ್ಯಾಕ್ಸಿ ಕ್ಯಾಬ್ ಹೆಚ್ಚುವರಿ ಆಸನಗಳನ್ನು ಅಳವಡಿಸಿಕೊಳ್ಳಲು ಅನುಮತಿಗಾಗಿ ಅರ್ಜಿ ಸಲ್ಲಿಸಿ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

**12+1 ಆಸನ ಸಾಮರ್ಥ್ಯ ಹೊಂದಿರುವ ಮಾಲೀಕರ ಗಮನಕ್ಕೆ ಈ ಮೂಲಕ ತಿಳಿಸುವುದೇನೆಂದರೆ ಪ್ರಸ್ತುತ ರಾಜ್ಯಾದ್ಯಂತ ನೊಂದಣಿ ಸಮಯದಲ್ಲಿ ವಿವಿಧ ವಿಲ್‌ಬೇಸ್ ಹೊಂದಿರುವ ವಿವಿಧ ವಾಹನಗಳಿಗೆ ಕರ್ನಾಟಕ ಮೋಟಾರು ವಾಹನ ನಿಯಮಾವಳಿಯಿಂದ ವಿನಾಯಿತಿ ನೀಡಿ 12 + 1 ಆಸನ ಸಾಮರ್ಥ್ಯವುಳ್ಳ ಮ್ಯಾಕ್ಸಿ ಕ್ಯಾಬ್ ಎಂದು ನೋಂದಾಯಿಸಿಕೊಂಡು ಅಂತಹ ವಾಹನಗಳಿಗೆ ಪರವಾನಗಿ ಪಡೆದು ಕಾರ್ಯಾಚರಿಸಲು ಅನುಮತಿ ನೀಡಲಾಗಿರುತ್ತದೆ.**

**ಆದರೆ ಇಂತಹ ವಾಹನಗಳ ಮಾಲೀಕರು ತಮ್ಮ ವಾಹನಗಳಲ್ಲಿ ಹೆಚ್ಚುವರಿಯಾಗಿ ಆಸನಗಳನ್ನು ಆವಡಿಸಿಕೊಂಡು ನಿಯಮಬಾಹಿರವಾಗಿ ಅಚರಿಸುತ್ತಿರುವುದನ್ನು ಗಮನಿಸಿ ಕಳೆದ ಎರಡು ದಿನಗಳಿಂದ ಇಂತಹ ವಾಹನಗಳ ಮೇಲೆ ವಿಶೇಷ ಕಾರ್ಯಾಚರಣೆಯ ಮೂಲಕ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಇದರಿಂದ ಭಾದಿತರಾದ ಮಾಲಿಕರುಗಳು ಹೆಚ್ಚುವರಿಯಾಗಿ ಅಳವಡಿಸಿಕೊಂಡಿರುವ ಆಸನಗಳ ಬಗ್ಗೆ ನೋಂದಣಿ ಪುಸ್ತಕದಲ್ಲಿ**

ನಮೂದಿಸಿ ಸೂಕ್ತ ರಹದಾರಿಯನ್ನು ನೀಡಿ ತಮ್ಮ ವಾಹನಗಳನ್ನು ನಿಯಮಬದ್ಧವಾಗಿ ಕಾರ್ಯಾಚರಿಸಲು ಅನುವುಮಾಡಿಕೊಡಬೇಕೆಂದು ವಿನಂತಿಸಿರುತ್ತಾರೆ.

ಇಂತಹ ವಾಹನಗಳ ಮಾಲೀಕರ ವಿನಂತಿಯನ್ನು ಪರಿಗಣಿಸಿ ಹೆಚ್ಚುವರಿ ಆಸನಗಳ ನೋಂದಣಿಯ ಬಗ್ಗೆ ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಕೋರಿಕೆಯನ್ನು ಸಲ್ಲಿಸಿದ್ದಲ್ಲಿ ಅಂತಹ ವಾಹನಗಳ ನೋಂದಣಿ ಪ್ರಮಾಣ ಪತ್ರದಲ್ಲಿ ಮಾರ್ಪಾಡು ಮಾಡುವಂತೆ ಎಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಆದುದರಿಂದ ಹೆಚ್ಚುವರಿ ಆಸನಗಳನ್ನು ಆಳವಡಿಸಿಕೊಂಡಿರುವ ವಾಹನಗಳ ಮಾಲೀಕರುಗಳು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ವಾಹನದ ವಿವರಗಳನ್ನು ಮಾರ್ಪಾಡು ಮಾಡುವಂತೆ ಕೂಡಲೇ ಕೋರಿಕೆ ಸಲ್ಲಿಸುವಂತೆ ಹಾಗೂ ಸೂಕ್ತ ರಹದಾರಿಯನ್ನು ರಾಜ್ಯ ಸಾರಿಗೆ ಪ್ರಾಧಿಕಾರದಿಂದ ಪಡೆದು ಅನ್ವಯಿಸುವ ತೆರಿಗೆಯನ್ನು ಪಾವತಿಸಿ ವಾಹನಗಳನ್ನು ಕಾರ್ಯಾಚರಿಸುವಂತೆ ಈ ಮೂಲಕ ತಿಳಿಸಲಾಗಿದೆ.

## ವಿವಿಧ ಹುದ್ದೆಗಳ ಮೂಲ ದಾಖಲೆಗಳ ಪರಿಶೀಲನೆ – ಆರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಗ್ರೂಪ್ 'ಸಿ' ವೃಂದದ ತಾಂತ್ರಿಕ ಹುದ್ದೆಗಳಾದ ಅಲ್ಪಸಂಖ್ಯಾತರ ನಿರ್ದೇಸನಾಲಯದಲ್ಲಿನ ಮಾದರಿ ವಸತಿ ಶಾಲೆ (ನವೋದಯ) ಗಳಲ್ಲಿನ ಸ್ನಾತಕೋತ್ತರ ಪದವೀಧರರ ಕನ್ನಡ ಭಾಷಾ ಶಿಕ್ಷಕರು, ಇಂಗ್ಲೀಷ್ ಭಾಷಾ ಶಿಕ್ಷಕರು, ಹಿಂದಿ ಭಾಷಾ ಶಿಕ್ಷಕರು, ಗಣಿತಶಾಸ್ತ್ರ ಶಿಕ್ಷಕರು, ಸಮಾಜ ವಿಜ್ಞಾನ ಶಿಕ್ಷಕರು, ಭೌತಶಾಸ್ತ್ರ ಶಿಕ್ಷಕರು, ರಸಾಯನಶಾಸ್ತ್ರ ಶಿಕ್ಷಕರು, ಗಣಕಯಂತ್ರ ಶಿಕ್ಷಕರ ಹುದ್ದೆಗಳು ಹಾಗೂ ಗ್ರಂಥಪಾಲಕರು, ಮಹಿಳಾ ಶುಶ್ರೂಷಕಿಯರ ಹುದ್ದೆಗಳ ಮೂಲದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in ಪ್ರಕಟಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 16–02–2020 ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ**

**ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 6.30 ಗಂಟೆಯಿಂದ ಬೆಳಿಗ್ಗೆ 7.30 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಕುಮಾರಿ ವಿದುಶಿ ತುಷಾರಾ ವಾಸುದೇವಾಚಾರ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

## ಫೆಬ್ರವರಿ 19 ರಂದು
## ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಫೆಬ್ರವರಿ 19 ರ ಬುಧವಾರದಂದು ಬೆಳಿಗ್ಗೆ 11.30 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು ಇಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಹಮ್ಮಿಕೊಳ್ಳಲಾಗಿದೆ.

ಶ್ರೀ ಶ್ರೀ ಮಂಜುನಾಥ ಸ್ವಾಮೀಜಿ, ಶ್ರೋ ಗೋಸಾಯಿ ಮಹಾಸಂಸ್ಥಾನಮಠ, ಶ್ರೀ ಭವಾನಿಪೀಠ, ಬೆಂಗಳೂರು ಇವರ ಸಾನಿಧ್ಯದಲ್ಲಿ ನಡೆಯಲಿದೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಉದ್ಘಾಟಿಸಲಿದ್ದಾರೆ.

ರಾಸಾಯನಿಕ ಮತ್ತು ರಸಗೊಬ್ಬರ ಸಚಿವರು ಡಿ.ವಿ. ಸದಾನಂದ ಗೌಡ, ಹಣಕಾಸು ಸಚಿವೆ ಶ್ರೀಮತಿ ನಿರ್ಮಲಾ ಸೀತಾರಾಮನ್ ಅವರುಗಳು ಉಪಸ್ಥಿತರಿರುವರು.

ರಾಜ್ಯದ ಉಪ ಮುಖ್ಯಮಂತ್ರಿಗಳು ಹಾಗೂ ಅನೇಕ ಸಚಿವ ಸಂಪುಟ ಸದಸ್ಯರು ಸೇರಿದಂತೆ  ಇನ್ನಿತರ ಗಣ್ಯರು ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಈ ಜಯಂತಿ ಸಮಾರಂಭದ ಅಧ್ಯಕ್ಷತೆಯನ್ನು ಚಿಕ್ಕಪೇಟೆ ವಿಧಾನಸಭಾ ಸದಸ್ಯ ಉದಯ್ ಬಿ. ಗರುಡಾಚಾರ್ ಅವರು ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## **ಸಚಿವರ ಪ್ರವಾಸ**

ಬೆಂಗಳೂರು, ಫೆಬ್ರವರಿ 15 (ಕರ್ನಾಟಕ ವಾರ್ತೆ)
ವಸತಿ ಹಾಗೂ ಮೈಸೂರು ಮತ್ತು ಕೊಡಗು ಜಿಲ್ಲೆಗಳ ಉಸ್ತುವಾರಿ ಸಚಿವರಾದ ವಿ ಸೋಮಣ್ಣ ಅವರು ಫೆಬ್ರವರಿ 16 ರಂದು ಬೆಂಗಳೂರು ಗ್ರಾಮಾಂತರ ಹಾಗೂ ತುಮಕೂರು ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ನಗರಕ್ಕೆ ಹಿಂತಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.